6

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ 1ನೇ ತ್ರೈಮಾಸಿಕ ಯೋಜನೇತರ ಅನುದಾನ ಬಿಡುಗಡೆ ಮಾಡುವ ಬಗ್ಗೆ.**

ಓದಲಾಗಿದೆ :-

ಹಣಕಾಸು ನಿಯಂತ್ರಣಾಧಿಕಾರಿ, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಇವರ ದಿನಾಂಕ : 08-04-2013ರ ಪತ್ರ ಸಂಖ್ಯೆ : ಹನಿಅ/ಬ್ಲಾಕ್ ಅನು/2013-14.

ಪ್ರಸ್ತಾವನೆ :-

ರಾಜ್ಯ ಸರ್ಕಾರವು 2013-14ನೇ ಸಾಲಿನ ಆಯವ್ಯಯದಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಯೋಜನೇತರ ಉದ್ದೇಶಗಳಿಗೆ ಲೆಕ್ಕಶೀರ್ಷಿಕೆ 2415-80-004-2-01-101 ಅಡಿಯಲ್ಲಿ ರೂ. 7000.00 ಲಕ್ಷಗಳನ್ನು ಹಂಚಿಕೆ ಮಾಡಿರುತ್ತದೆ. ಮೇಲೆ-(1)ರಲ್ಲಿ ಓದಲಾದ ಧಾರವಾಡ ಕೃಷಿ ವಿಶ್ವವಿದ್ಯಾಲಯದ ದಿನಾಂಕ : 08-04-2013ರ ಪತ್ರದೊಂದಿಗೆ 2012-13ನೇ ಸಾಲಿಗೆ ಯೋಜನೇತರ ಉದ್ದೇಶಗಳಿಗೆ ಬಿಡುಗಡೆ ಮಾಡಲಾದ ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಒದಗಿಸುತ್ತಾ, 2013-14ನೇ ಸಾಲಿಗೆ ರಾಜ್ಯ ಸರ್ಕಾರವು ಯೋಜನೇತರ ಲೆಕ್ಕಶೀರ್ಷಿಕೆ ಅಡಿಯಲ್ಲಿ ಹಂಚಿಕೆ ಮಾಡಿರುವ ರೂ. 7000.00 ಲಕ್ಷಗಳಲ್ಲಿ ಏಪ್ರಿಲ್ 2013ರಿಂದ ವೇತನ ಹಾಗೂ ಇನ್ನಿತರೆ ಯೋಜನೇತರ ವೆಚ್ಚಗಳನ್ನು ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಕೃಇ 16 ಕೃವಿಧಾ 2013**

**ಬೆಂಗಳೂರು, ದಿನಾಂಕ : 28-05-2013.**

**ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಯೋಜನೇತರ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರವು ಲೆಕ್ಕಶೀರ್ಷಿಕೆ 2415-80-004-2-01-101 ಅಡಿಯಲ್ಲಿ ಹಂಚಿಕೆ ಮಾಡಿರುವ ರೂ. 7000.00 ಲಕ್ಷಗಳಲ್ಲಿ ಏಪ್ರಿಲ್ 2013ರಿಂದ ಜೂನ್ 2013ರವರೆಗೆ ವೇತನ ಮತ್ತು** ಇನ್ನಿತರೆ ಯೋಜನೇತರ ವೆಚ್ಚಗಳಿಗಾಗಿ ರೂ. 1750.00 ಲಕ್ಷಗಳನ್ನು (ಒಂದು ಸಾವಿರದ ಏಳು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಮೊದಲನೇ ತ್ರೈಮಾಸಿಕ ಯೋಜನೇತರ ಅನುದಾನವಾಗಿ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ :-

1. **ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;**
2. **ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;**
3. **ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;**

4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
6. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು Regional Joint Director of Collegiate Education, Dharwad, ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ : 09-05-2013ರ ಟಿಪ್ಪಣಿ ಸಂಖ್ಯೆ : ಕೃಇ 80 ಆಂಆಸ 2013ಯಲ್ಲಿ ನೀಡಿರುವ ಅಭಿಪ್ರಾಯದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ. ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಕೃಷಿ ಯೋಜನೆ)

ಇವರಿಗೆ :-
1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ), ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ.
3. ಜಿಲ್ಲಾ ಖಜಾನಾಧಿಕಾರಿಗಳು, ಧಾರವಾಡ.
4. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ
5. ಕ್ಷೇತ್ರೀಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ.
6. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.